## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**– 2006 ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ಹುದ್ದೆಗಳನ್ನು ಧಾರಣೆ ಮಾಡಿ ದಿನಾಂಕ: 01–01–2016ರ ನಂತರ ನಿವೃತ್ತರಾದ ಸಿಬ್ಬಂದಿಗಳಿಗೆ ತುಟ್ಟಿಭತ್ಯೆ ದರಗಳ ಪರಿಷ್ಕರಣೆ ಮತ್ತು ದಿನಾಂಕ: 01–01–2016ಕ್ಕೆ ಪೂರ್ವದಲ್ಲಿ ನಿವೃತ್ತರಾದವರಿಗೆ ತುಟ್ಟಿ ಭತ್ಯೆ ಅನ್ವಯಿಕೆ ಬಗ್ಗೆ.

**ಓದಲಾಗಿದೆ:**
1. ದಿನಾಂಕ: 21–04–2012ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 7 ಎಸ್‌ಆರ್‌ಪಿ 2012.
2. ದಿನಾಂಕ: 03–05–2012ರ ಸರ್ಕಾರಿ ಆದೇಶ ಸಂಖ್ಯೆ: ಆಇ(ವಿಶೇಷ) 81 ಪಿಇಎನ್ 2012.
3. ದಿನಾಂಕ: 07–01–2013ರ ಸರ್ಕಾರಿ ಆದೇಶ ಸಂಖ್ಯೆ: ಆಇ (ವಿಶೇಷ) 113 ಪಿಇಎನ್ 2013.
4. ದಿನಾಂಕ: 06–10–2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 39 ಎಸ್‌ಆರ್‌ಪಿ 2017.
5. ದಿನಾಂಕ: 19–04–2018ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 6 ಎಸ್‌ಆರ್‌ಪಿ 2018.
6. ದಿನಾಂಕ: 24–04–2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 33 ಪಿಇಎನ್ 2018.
7. ದಿನಾಂಕ: 18–06–2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್‌ಆರ್‌ಪಿ 2018.

**ಪ್ರಸ್ತಾವನೆ:**

6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ಮೇಲೆ (5) ಮತ್ತು (6)ರಲ್ಲಿ ಓದಲಾದ ದಿನಾಂಕ: 19–04–2018 ಮತ್ತು 24–04–2018ರ ಸರ್ಕಾರಿ ಆದೇಶಗಳಲ್ಲಿ ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳು ಹಾಗೂ ಪಿಂಚಣಿ/ಕುಟುಂಬ ಪಿಂಚಣಿಯನ್ನು ದಿನಾಂಕ: 01–07–2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶಿಸಲಾಗಿರುತ್ತದೆ. ಮುಂದುವರೆದು, ಈ ಮೇಲೆ (7)ರಲ್ಲಿ ಓದಲಾದ ದಿನಾಂಕ: 18–06–2018ರ ಸರ್ಕಾರಿ ಆದೇಶದಲ್ಲಿ, ರಾಜ್ಯ ಸರ್ಕಾರಿ ನೌಕರರು ಮತ್ತು ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ತುಟ್ಟಿ ಭತ್ಯೆಯನ್ನು ಮಂಜೂರು ಮಾಡಿ ಆದೇಶ ಹೊರಡಿಸಲಾಗಿರುತ್ತದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತನ್ನ ನೌಕರರುಗಳಿಗೆ ಅವುಗಳದೇ ಆದ ವೇತನ ನಿಯಮ ಮತ್ತು ವೇತನ ರಚನೆ ಹಾಗೂ ಪರಿಷ್ಕರಣೆ ಅವಧಿಯನ್ನು ಅನುಸರಿಸಿಕೊಂಡು ಬಂದಿರುತ್ತವೆ. ಕೇಂದ್ರ ಸರ್ಕಾರದ ಸೂಚನೆಯಂತೆ ಹಾಗೂ ಕೇಂದ್ರ ಸರ್ಕಾರದ ಸಹಾಯಾನುದಾನದ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರದ ಅಧೀನ ಸಂಸ್ಥೆಗಳಲ್ಲಿ (ವಿಶ್ವವಿದ್ಯಾಲಯಗಳೂ ಸೇರಿದಂತೆ) ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಕೆಲವು ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು, ಕೇಂದ್ರ ಸರ್ಕಾರದ ಮಾದರಿಯಲ್ಲಿ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳನ್ನು ರಾಜ್ಯ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ಮಂಜೂರು ಮಾಡಿಕೊಂಡು ಬಂದಿರುತ್ತದೆ. ಪ್ರಸ್ತುತ ರಾಜ್ಯದಲ್ಲಿನ ಸರ್ಕಾರಿ/ಸರ್ಕಾರಿ ಅನುದಾನಿತ ಕಾಲೇಜುಗಳು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ವೇತನವನ್ನು 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿನ ಅವಕಾಶಗಳ ಪ್ರಕಾರ ದಿನಾಂಕ:01–01–2006ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿದ್ದು, ಕೇಂದ್ರ ಸರ್ಕಾರದ ಸಹಾಯಾನುದಾನ ಲಭ್ಯವಿಲ್ಲದ ಪ್ರಕರಣಗಳಲ್ಲಿ ಈ ಪರಿಷ್ಕರಣೆಯನ್ನು ನಂತರದ ದಿನಾಂಕಗಳಂದು ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ.

ಮೇಲೆ (1) ಮತ್ತು (2)ರಲ್ಲಿ ಓದಲಾದ ದಿನಾಂಕ: 21–04–2012 ಮತ್ತು 03–05–2012ರ ಆದೇಶ ಗಳಲ್ಲಿ ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆ ಮತ್ತು ಪಿಂಚಣಿಗಳನ್ನು ದಿನಾಂಕ: 01–04–2012ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶ ಹೊರಡಿಸಲಾಗಿರುತ್ತದೆ. ತದನಂತರ, 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸಿ ದಿನಾಂಕ: 01–04–2012ರ ತರುವಾಯ ನಿವೃತ್ತರಾದ ಬೋಧಕ ಸಿಬ್ಬಂದಿಗಳ ಪಿಂಚಣಿ ನಿರ್ಧರಣೆಯ ಸೂತ್ರವನ್ನು ಮೇಲೆ (3)ರಲ್ಲಿ

ಓದಲಾದ ದಿನಾಂಕ: 07-01-2013ರ ಆದೇಶದಲ್ಲಿ ನೀಡಲಾಗಿದ್ದು, ಅದರಂತೆ ದಿನಾಂಕ: 01-04-2012ರ ನಂತರದಲ್ಲಿ ನಿವೃತ್ತರಾಗುವ ಬೋಧಕ ಸಿಬ್ಬಂದಿಗಳ ಪಿಂಚಣಿಯನ್ನು ನಿಷ್ಕರ್ಷಿಸಿ ನಿಗದಿಪಡಿಸಬೇಕಾಗಿರುತ್ತದೆ.

ಪ್ರಸ್ತುತ ಕೇಂದ್ರ ಸರ್ಕಾರದ ಅಧೀನ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳನ್ನು ದಿನಾಂಕ: 01-01-2016ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿರುತ್ತದೆ. ರಾಜ್ಯ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳ ಪರಿಷ್ಕರಣೆಯ ವಿಷಯವು ಪ್ರಸ್ತುತ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

**ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ಹುದ್ದೆಗಳನ್ನು ಧಾರಣೆ ಮಾಡಿ ನಿವೃತ್ತರಾದ ಬೋಧಕ ಸಿಬ್ಬಂದಿಗಳನ್ನು ರಾಜ್ಯ ಸರ್ಕಾರಿ ಪಿಂಚಣಿದಾರರೆಂದು ಪರಿಗಣಿಸುವುದರಿಂದ,** ರಾಜ್ಯ ಸರ್ಕಾರಿ ಪಿಂಚಣಿದಾರರು/ಕುಟುಂಬ ಪಿಂಚಣಿದಾರರಿಗೆ ಅನ್ವಯಿಸುವ ನಿಯಮಗಳು ರಾಜ್ಯ ಸರ್ಕಾರದ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಯ ಪಿಂಚಣಿದಾರರಿಗೂ ಸಹ ಅನ್ವಯಿಸತಕ್ಕದ್ದು. ಅದರಂತೆ, 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಯಲ್ಲಿ ಹುದ್ದೆಗಳನ್ನು ಧಾರಣೆ ಮಾಡಿ ದಿನಾಂಕ: 01-01-2016ಕ್ಕೆ ಪೂರ್ವದಲ್ಲಿ ನಿವೃತ್ತರಾದ ಬೋಧಕ ಸಿಬ್ಬಂದಿಗಳ ಪಿಂಚಣಿಯನ್ನು ಈ ಮೇಲೆ (3) ಮತ್ತು (6) ರಲ್ಲಿ ಓದಲಾದ ದಿನಾಂಕ: 07-01-2013 ಮತ್ತು 24-04-2018ರ ಆದೇಶಗಳಲ್ಲಿನ ಅವಕಾಶಗಳ ಪ್ರಕಾರ ನಿರ್ಣಯಿಸಿ ನಿಗದಿಪಡಿಸಬೇಕಾಗಿರುತ್ತದೆ. ಸದರಿ ಪಿಂಚಣಿದಾರರು/ಕುಟುಂಬ ಪಿಂಚಣಿದಾರರು ಮೇಲೆ (7)ರಲ್ಲಿ ಓದಲಾದ ದಿನಾಂಕ: 18-06-2018ರ ಆದೇಶದನ್ವಯ ಪಿಂಚಣಿಯ ಮೇಲೆ ತುಟ್ಟಿ ಭತ್ಯೆಯನ್ನು ಪಡೆಯಲು ಅರ್ಹರಿದ್ದು, ಅವರಿಗೆ ಪ್ರತ್ಯೇಕ ಆದೇಶವನ್ನು ಹೊರಡಿಸುವ ಅವಶ್ಯಕತೆ ಇರುವುದಿಲ್ಲ.

ಕೇಂದ್ರ ಸರ್ಕಾರವು 7ನೇ ಪರಿಷ್ಕೃತ ವೇತನ ಶ್ರೇಣಿಯನ್ನು ದಿನಾಂಕ: 01-01-2016ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಿದ್ದು, ರಾಜ್ಯ ಸರ್ಕಾರವು 2016ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳನ್ನು ಇನ್ನೂ ಅನುಷ್ಠಾನಗೊಳಿಸಿರುವುದಿಲ್ಲವಾದ್ದರಿಂದ, ದಿನಾಂಕ: 01-01-2016 ರ ನಂತರ ನಿವೃತ್ತರಾಗುವ ಬೋಧಕ ಸಿಬ್ಬಂದಿಗಳ ನಿವೃತ್ತಿ ವೇತನವನ್ನು, 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಯ ಪರಿಷ್ಕರಣೆಯ ನಂತರ ರಾಜ್ಯ ಸರ್ಕಾರವು ಹೊರಡಿಸಬಹುದಾದ ಆದೇಶಗಳ ಪ್ರಕಾರ ಪುನರ್ನಿಗದಿಪಡಿಸಬೇಕಾಗಿರುತ್ತದೆ.

ಈ ಮೇಲಿನ ಅಂಶಗಳ ಬೆಳಕಿನಲ್ಲಿ ಈ ಕೆಳಗಿನ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 14 ಎಸ್‌ಆರ್‌ಪಿ 2018**
**ಬೆಂಗಳೂರು, ದಿನಾಂಕ 10ನೇ ಜುಲೈ 2018**

2006 ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ಹುದ್ದೆಗಳನ್ನು ಧಾರಣೆ ಮಾಡಿ ದಿನಾಂಕ: 01-01-2016ರ ನಂತರ ನಿವೃತ್ತರಾದ ಪಿಂಚಣಿದಾರರು/ಕುಟುಂಬ ಪಿಂಚಣಿದಾರರಿಗೆ ಹಾಲಿ ಲಭ್ಯವಿರುವ ತುಟ್ಟಿ ಭತ್ಯೆಯನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 45.25 ರಿಂದ ಶೇಕಡ 47ಕ್ಕೆ ಹೆಚ್ಚಿಸಿ ದಿನಾಂಕ: 1ನೇ ಜನವರಿ 2018ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. 2006 ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ಹುದ್ದೆಗಳನ್ನು ಧಾರಣೆ ಮಾಡಿ ದಿನಾಂಕ: 01-01-2016ರ ಪೂರ್ವದಲ್ಲಿ ನಿವೃತ್ತರಾದ ಪಿಂಚಣಿದಾರರು/ಕುಟುಂಬ ಪಿಂಚಣಿದಾರರ ಪ್ರಕರಣದಲ್ಲಿ ಮಾತ್ರ ಪಿಂಚಣಿ/ಕುಟುಂಬ ಪಿಂಚಣಿಯು ದಿನಾಂಕ: 24-04-2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 33 ಪಿಇಎನ್ 2018ರಲ್ಲಿನ ಅವಕಾಶಗಳ ಪ್ರಕಾರ ಪರಿಷ್ಕರಣೆಗೊಳ್ಳತಕ್ಕದ್ದು.

3. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ದಿನಾಂಕ: 18-06-2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್ಆರ್‌ಪಿ 2018ರ ಅವಕಾಶಗಳನ್ವಯ ಲಭ್ಯವಿರುವ ತುಟ್ಟಿ ಭತ್ಯೆಯ ದರಗಳು 2006ರ ಪರಿಷ್ಕೃತ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ಹುದ್ದೆಗಳನ್ನು ಧಾರಣೆ ಮಾಡಿ ದಿನಾಂಕ:01-01-2016ಕ್ಕೆ ಪೂರ್ವದಲ್ಲಿ ನಿವೃತ್ತರಾದ ಪಿಂಚಣಿದಾರರು/ ಕುಟುಂಬ ಪಿಂಚಣಿದಾರರಿಗೂ ಅನ್ವಯವಾಗುತ್ತದೆ.

4. ದಿನಾಂಕ: 01-01-2016ರ ನಂತರ ನಿವೃತ್ತರಾದ ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳ ಬೋಧಕ ಸಿಬ್ಬಂದಿಗಳ ನಿವೃತ್ತಿ ವೇತನವು, ಸದರಿ ಸಿಬ್ಬಂದಿಗಳಿಗೆ 7ನೇ ಕೇಂದ್ರ ವೇತನ ಶ್ರೇಣಿಯ ಶಿಫಾರಸ್ಸಿನಂತೆ ವೇತನ ಪರಿಷ್ಕರಣೆಯನ್ನು ಜಾರಿಗೊಳಿಸಿದ ನಂತರ ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳ ಪ್ರಕಾರ ಪುನರ್ ಪರಿಶೀಲನೆಗೆ ಒಳಪಟ್ಟಿರುತ್ತದೆ.

5. ದಿನಾಂಕ: 07-01-2013ರ ಸರ್ಕಾರಿ ಆದೇಶ ಸಂಖ್ಯೆ: ಆಇ (ವಿಶೇಷ) 113 ಪಿಇಎನ್ 2012ರ ಅವಕಾಶಗಳು ಮುಂದಿನ ಆದೇಶದವರೆಗೆ ಮುಂದುವರೆದು ಅನ್ವಯಿಸುತ್ತವೆ.

6. ಈ ಆದೇಶದ ಮೇರೆಗೆ ಲಭ್ಯವಾಗುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡತಕ್ಕದ್ದು.

7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಡಿ.ಎಸ್.ಜೋಗೋಜೆ)**
**ಸರ್ಕಾರದ ಉಪ ಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು-2).**

BHR 10/7/18

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.

3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, 2ನೇ ಮಹಡಿ, ತಾಂತ್ರಿಕ ಶಿಕ್ಷಣ ಇಲಾಖೆ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು–1.
14. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–1
15. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
17. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
18. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
19. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
20. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
21. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
24. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
25. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
26. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in** ವೀಕ್ಷಿಸಿ.